**Akashvani : Bangalore**
**National Bulletin In Kannada**
**17.03.2024 / 7.35 am**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**17.03.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ೧೮ನೇ ಸಾರ್ವತ್ರಿಕ ಚುನಾವಣೆಗೆ ವೇಳಾಪಟ್ಟಿ ಪ್ರಕಟ; ಏಳು ಹಂತಗಳಲ್ಲಿ ಮತದಾನ

೨. ಕರ್ನಾಟಕದಲ್ಲಿ ಏಪ್ರಿಲ್ ೨೬, ಮೇ ೭ರಂದು ಎರಡು ಹಂತದಲ್ಲಿ ಲೋಕಸಭಾ ಚುನಾವಣೆ

೩. ಲೋಕಸಭಾ ಚುನಾವಣೆ ಹಿನ್ನೆಲೆ; ದೇಶಾದ್ಯಂತ ನೀತಿ ಸಂಹಿತೆ ಜಾರಿ

೪. ಮಹಿಳೆಯರ ಪ್ರೀಮಿಯರ್ ಲೀಗ್ ಕ್ರಿಕೆಟ್ - ಫೈನಲ್‌ನಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮುಖಾಮುಖಿ

**<><*<><>*><>**

ಕೇಂದ್ರ ಚುನಾವಣಾ ಆಯೋಗ ೧೮ನೇ ಲೋಕಸಭೆಗಾಗಿ ಏಳು ಹಂತದ ಚುನಾವಣಾ ವೇಳಾಪಟ್ಟಿ ಪ್ರಕಟಿಸಿದೆ. ಮತದಾನ ಏಪ್ರಿಲ್ ೧೯, ಏಪ್ರಿಲ್ ೨೬, ಮೇ ೭, ಮೇ ೧೩, ಮೇ ೨೦, ಮೇ ೨೫ ಹಾಗೂ ಜೂನ್ ೧ ರಂದು ನಡೆಯಲಿದ್ದು, ಮತ ಎಣಿಕೆ ಜೂನ್ ೪ ರಂದು ನಿಗದಿಯಾಗಿದೆ. ಚುನಾವಣಾ ಮಾದರಿ ನೀತಿ ಸಂಹಿತೆ ತಕ್ಷಣದಿಂದ ಜಾರಿಗೆಬಂದಿದೆ. ನವದೆಹಲಿಯಲ್ಲಿ ನಿನ್ನೆ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್, ಸುದ್ದಿಗೋಷ್ಠಿಯಲ್ಲಿ ಚುನಾವಣಾ ವೇಳಾಪಟ್ಟಿ ಬಿಡುಗಡೆ ಮಾಡಿದರು. ಮೊದಲ ಹಂತದಲ್ಲಿ ೧೦೨ ಲೋಕಸಭಾ ಸ್ಥಾನಗಳಿಗಾಗಿ ಏಪ್ರಿಲ್ ೧೯ ರಂದು, ಎರಡನೇ ಹಂತದಲ್ಲಿ ೮೯ ಸ್ಥಾನಗಳಿಗಾಗಿ ಏಪ್ರಿಲ್ ೨೬ ರಂದು, ಮೂರನೇ ಹಂತದಲ್ಲಿ ೯೪ ಸ್ಥಾನಗಳಿಗಾಗಿ ಮೇ ೭ ರಂದು, ನಾಲ್ಕನೇ ಹಂತದಲ್ಲಿ ೯೬ ಸ್ಥಾನಗಳಿಗಾಗಿ ಮೇ ೧೩ ರಂದು ಮತದಾನ ನಡೆಯಲಿದೆ. ಐದನೇ ಹಂತದಲ್ಲಿ ೪೯ ಲೋಕಸಭಾ ಕ್ಷೇತ್ರಗಳಿಗೆ ಮೇ ೨೦ ರಂದು ಹಾಗೂ ಆರನೇ ಹಂತದಲ್ಲಿ ೫೭ ಸ್ಥಾನಗಳಿಗೆ ಮೇ ೨೫ ರಂದು ಹಾಗೂ ಕೊನೆಯ ಮತ್ತು ಏಳನೇ ಹಂತದಲ್ಲಿ ೫೭ ಲೋಕಸಭಾ ಕ್ಷೇತ್ರಗಳಿಗಾಗಿ ಜೂನ್ ೧ ರಂದು ಮತದಾನ ನಿಗದಿಯಾಗಿದೆ. ಗುಜರಾತ್, ತಮಿಳುನಾಡು, ಪಂಜಾಬ್, ತೆಲಂಗಾಣ, ಕೇರಳ, ಹರಿಯಾಣ, ಹಿಮಾಚಲ ಪ್ರದೇಶ,

ದೆಹಲಿ, ಮೇಘಾಲಯ, ನಾಗಾಲ್ಯಾಂಡ್ ಸೇರಿದಂತೆ ೨೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಏಕಹಂತದ ಚುನಾವಣೆ ನಡೆಯಲಿದೆ. ಕರ್ನಾಟಕ, ರಾಜಸ್ತಾನ, ಮಣಿಪುರ ಮತ್ತು ತ್ರಿಪುರಾಗಳಲ್ಲಿ ಎರಡು ಹಂತದ ಮತದಾನವಿರುತ್ತದೆ. ಛತ್ತೀಸ್‌ಗಢ ಮತ್ತು ಅಸ್ಸಾಂನಲ್ಲಿ ಮೂರು ಹಂತದಲ್ಲಿ ಲೋಕಸಭಾ ಚುನಾವಣೆಗಳು ನಡೆಯಲಿವೆ. ಮಧ್ಯಪ್ರದೇಶ ಮತ್ತು ಜಾರ್ಖಂಡ್ ನಾಲ್ಕು ಹಂತಗಳಲ್ಲಿ ಹಾಗೂ ಮಹಾರಾಷ್ಟ್ರ, ಜಮ್ಮು ಮತ್ತು ಕಾಶ್ಮೀರಗಳಲ್ಲಿ ಐದು ಹಂತಗಳಲ್ಲಿ ಮತದಾನ ನಡೆಯುತ್ತದೆ.

ಉತ್ತರಪ್ರದೇಶ, ಬಿಹಾರ ಮತ್ತು ಪಶ್ಚಿಮ ಬಂಗಾಳಗಳಲ್ಲಿ ಏಳು ಹಂತಗಳಲ್ಲಿ ಮತದಾನ ನಿಗದಿಯಾಗಿದೆ ಎಂದು ಚುನಾವಣಾ ಆಯುಕ್ತರು ತಿಳಿಸಿದರು. ಸಿಕ್ಕಿಂ, ಒಡಿಶಾ, ಆಂಧ್ರಪ್ರದೇಶ ಮತ್ತು ಅರುಣಾಚಲ ಪ್ರದೇಶಗಳ ವಿಧಾನಸಭಾ ಚುನಾವಣಾ ವೇಳಾಪಟ್ಟಿಯನ್ನೂ ಆಯುಕ್ತರು ಪ್ರಕಟಿಸಿದ್ದಾರೆ.  ೩೨ ಸದಸ್ಯ ಬಲದ ಸಿಕ್ಕಿಂ ವಿಧಾನಸಭೆ, ೬೦ ಸದಸ್ಯ ಬಲದ ಅರುಣಾಚಲ ಪ್ರದೇಶ ವಿಧಾನಸಭೆ ಚುನಾವಣೆಗಳು ಏಪ್ರಿಲ್ ೧೯ ರಂದು ಲೋಕಸಭೆಯ ಚುನಾವಣೆಯೊಂದಿಗೆ ಒಂದೇ ಹಂತದಲ್ಲಿ ನಡೆಯಲಿವೆ. ೧೭೫ ಸದಸ್ಯ ಬಲದ ಆಂಧ್ರಪ್ರದೇಶ, ವಿಧಾನಸಭೆಯ ಮತದಾನ ಮೇ ೧೩ ರಂದು ಲೋಕಸಭೆಯ ಮತದಾನದೊಂದಿಗೆ ಒಂದೇ ಹಂತದಲ್ಲಿ ನಡೆಯಲಿದೆ. ೧೪೭ ಸದಸ್ಯ ಬಲದ ಒಡಿಶಾ ವಿಧಾನಸಭೆಗಾಗಿ ಮೇ ೧೩, ೨೦, ೨೫ ಹಾಗೂ ಜೂನ್ ೧ ರಂದು ಲೋಕಸಭೆ ಮತದಾನದೊಂದಿಗೆ ನಾಲ್ಕು ಹಂತದಲ್ಲಿ ಮತದಾನ ನಡೆಯಲಿದೆ. ಲೋಕಸಭಾ ಚುನಾವಣೆಗೆ ಆಯೋಗ ಸಂಪೂರ್ಣ ಸಿದ್ಧವಾಗಿದೆ ಎಂದು ತಿಳಿಸಿದ ಮುಖ್ಯ ಚುನಾವಣಾ ಆಯುಕ್ತರು, ದೇಶದಲ್ಲಿ ೯೭ ಕೋಟಿ ನೊಂದಾಯಿತ ಮತದಾರರಿದ್ದಾರೆ. ಹತ್ತುವರೆ ಲಕ್ಷಕ್ಕೂ ಅಧಿಕ ಮತಗಟ್ಟೆಗಳನ್ನು ನಿರ್ಮಿಸಲಾಗುತ್ತಿದ್ದು, ಒಂದುವರೆ ಕೋಟಿಗೂ ಅಧಿಕ ಸಿಬ್ಬಂದಿ ಇದನ್ನು ನಿರ್ವಹಸಿಲಿದ್ದಾರೆ ಎಂದರು. ೧ ಕೋಟಿ ೮೨ ಲಕ್ಷ ಹೊಸ ಮತದಾರರಿದ್ದು, ೮೫ ವರ್ಷಕ್ಕೂ ಹೆಚ್ಚಿನ ವಯೋಮಾನದ ಹಿರಿಯ ಮತದಾರರಿಗೆ ಹಾಗೂ ವಿಶೇಷ ಚೇತನರಿಗೆ ಮನೆಯಿಂದಲೇ ಮತದಾನ ಮಾಡಲು ಇದೇ ಮೊದಲ ಬಾರಿಗೆ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.  ಮತದಾನಕ್ಕೆ ಅಗತ್ಯವಾಗಿರುವ ಇವಿಎಂ ಮತ್ತು ವಿವಿ ಪ್ಯಾಟ್ಸ್ ಯಂತ್ರಗಳು ಸಾಕಷ್ಟು ಸಂಖ್ಯೆಯಲ್ಲಿ ಲಭ್ಯವಿದ್ದು, ಮತದಾನ ಸರಾಗವಾಗಿ ನಡೆಯುವುದನ್ನು ಖಾತರಿಪಡಿಸಲು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು. ತೋಳ್‌ಬಲ, ಹಣ, ತಪ್ಪು ಮಾಹಿತಿ ಹಾಗೂ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಈ ನಾಲ್ಕೂ ಅಂಶಗಳನ್ನು ಚುನಾವಣಾ ಆಯೋಗ ಸಶಕ್ತವಾಗಿ ನಿರ್ವಹಿಸಿ, ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಲಿದೆ ಎಂದು ಆಯುಕ್ತರು ಹೇಳಿದರು. ಈ ಸಂದರ್ಭದಲ್ಲಿ ಮದ್ಯ, ನಗದು, ಉಡುಗೊರೆ, ಮಾದಕ ವಸ್ತುಗಳ ಸಾಗಾಟ ಮತ್ತು ವಿತರಣೆ ತಡೆಗಟ್ಟಲು ಸಂಬಂಧಪಟ್ಟ ಜಾರಿ ಸಂಸ್ಥೆಗಳಿಗೆ

ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದ ಅವರು, ಆನ್‌ಲೈನ್ ನಗದು ವರ್ಗಾವಣೆ ಬಗ್ಗೆಯೂ ನಿಕಟ ಎಚ್ಚರಿಕೆ ವಹಿಸಲಾಗಿದೆ ಎಂದರು. ಚುನಾವಣಾ ಸಂದರ್ಭದಲ್ಲಿ ಕಡಿಮೆ ಕಾಗದ ಬಳಕೆ ಹಾಗೂ ತ್ಯಾಜ್ಯ ನಿರ್ವಹಣೆಗೆ ಒತ್ತು ನೀಡುವಂತೆ ನಿರ್ದೇಶನ ನೀಡಲಾಗಿದೆ. ದೇಶಾದ್ಯಂತ ಮತದಾನಕ್ಕೆ ಮುಕ್ತ ವಾತಾವರಣ ಕಲ್ಪಿಸಲು ೨ ಸಾವಿರದ ೧೦೦ ವೀಕ್ಷಕರನ್ನು ನಿಯೋಜಿಸಲಾಗುತ್ತದೆ ಎಂದು ಅವರು ಮಾಹಿತಿ ನೀಡಿದರು. ಪ್ರಸಕ್ತ ಲೋಕಸಭೆಯ ಅವಧಿ ಜೂನ್ ೧೬ ರಂದು ಮುಕ್ತಾಯಗೊಳ್ಳಲಿದೆ. ಚುನಾವಣಾ ಆಯುಕ್ತರಾದ ಡಾ.ಎಸ್.ಎಸ್.ಸಂಧು ಹಾಗೂ ಗ್ಯಾನೇಶ್ ಕುಮಾರ್ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

<><*<><>*><>

ಕರ್ನಾಟಕದ ೨೮ ಲೋಕಸಭಾ ಕ್ಷೇತ್ರಗಳಲ್ಲಿ ಎರಡು ಹಂತದಲ್ಲಿ ಚುನಾವಣೆ ನಡೆಯಲಿದೆ. ಮೈಸೂರು-ಕೊಡಗು, ಚಾಮರಾಜನಗರ, ಮಂಡ್ಯ, ಹಾಸನ, ಬೆಂಗಳೂರು ದಕ್ಷಿಣ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ಗ್ರಾಮಾಂತರ, ಚಿತ್ರದುರ್ಗ, ದಕ್ಷಿಣ ಕನ್ನಡ, ಕೋಲಾರ, ತುಮಕೂರು, ಉಡುಪಿ-ಚಿಕ್ಕಮಗಳೂರು, ಚಿಕ್ಕಬಳ್ಳಾಪುರ ಕ್ಷೇತ್ರಗಳಲ್ಲಿ ಮೊದಲ ಹಂತದ ಚುನಾವಣೆ ಅಧಿಸೂಚನೆ ಮಾರ್ಚ್ ೨೮ ರಂದು ಹೊರಬೀಳಲಿದೆ. ನಾಮಪತ್ರ ಸಲ್ಲಿಸಲು ಏಪ್ರಿಲ್ ೪ ಕೊನೆಯ ದಿನ. ನಾಮಪತ್ರ ಪರಿಶೀಲನೆ ಏಪ್ರಿಲ್ ೫ ರಂದು ನಡೆಯಲಿದೆ. ನಾಮಪತ್ರ ಹಿಂತೆಗೆದುಕೊಳ್ಳಲು ಏಪ್ರಿಲ್ ೮ ಕೊನೆಯ ದಿನ. ಮತದಾನ ಏಪ್ರಿಲ್ ೨೬ ರಂದು ನಡೆಯಲಿದೆ. ಬೆಳಗಾವಿ, ಬಳ್ಳಾರಿ, ಚಿಕ್ಕೋಡಿ, ಹಾವೇರಿ, ಕಲಬುರಗಿ, ಬೀದರ್, ಧಾರವಾಡ, ಕೊಪ್ಪಳ, ರಾಯಚೂರು, ಉತ್ತರಕನ್ನಡ, ದಾವಣಗೆರೆ, ಶಿವಮೊಗ್ಗ, ಬಾಗಲಕೋಟೆ, ವಿಜಯಪುರ ಲೋಕಸಭಾ ಕ್ಷೇತ್ರಗಳಲ್ಲಿ ಎರಡನೇ ಹಂತದ ಚುನಾವಣೆ ನಡೆಯಲಿದ್ದು, ಅಧಿಸೂಚನೆ ಏಪ್ರಿಲ್ ೧೨ ರಂದು ಹೊರಬೀಳಲಿದೆ. ನಾಮಪತ್ರ ಸಲ್ಲಿಸಲು ಏಪ್ರಿಲ್ ೧೯ ಕೊನೆಯ ದಿನ. ನಾಮಪತ್ರ ಪರಿಶೀಲನೆ ಏಪ್ರಿಲ್ ೨೦ ರಂದು ನಡೆಯಲಿದೆ. ನಾಮಪತ್ರ ಹಿಂತೆಗೆದುಕೊಳ್ಳಲು ಏಪ್ರಿಲ್ ೨೨ ಕೊನೆಯ ದಿನ. ಮತದಾನ ಮೇ ೭ ರಂದು ನಡೆಯಲಿದ್ದು, ಮತ ಎಣಿಕೆ ಜೂನ್ ೪ ರಂದು ನಿಗದಿಯಾಗಿದೆ. ಚುನಾವಣೆ ವೇಳಾಪಟ್ಟಿ ಪ್ರಕಟವಾಗಿರುವ ಹಿನ್ನೆಲೆಯಲ್ಲಿ ತಕ್ಷಣ ಮಾದರಿ ನೀತಿ ಸಂಹಿತೆ ಜಾರಿಗೊಳಿಸಬೇಕು ಎಂದು ಕೇಂದ್ರ ಚುನಾವಣಾ ಆಯೋಗ, ಕೇಂದ್ರ ಸರ್ಕಾರದ ಸಂಪುಟ ಕಾರ್ಯದರ್ಶಿ, ಎಲ್ಲ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳು ಮತ್ತು ಆಡಳಿತಗಾರರು ಹಾಗೂ ಎಲ್ಲಾ ಮುಖ್ಯ ಚುನಾವಣಾ ಅಧಿಕಾರಿಗಳಿಗೆ ಸೂಚನೆ ನೀಡಿದೆ. ಚುನಾವಣೆ ಪ್ರಕಟಗೊಂಡಿರುವುದರಿಂದ ಖಾಸಗಿ ಆಸ್ತಿಗಳಲ್ಲಿ ಕಾನೂನು ಮತ್ತು ನ್ಯಾಯಾಲಯ ನಿರ್ದೇಶನ ಹೊರತುಪಡಿಸಿದಂತೆ ಉಳಿದ ಎಲ್ಲ ಅನಧಿಕೃತ ರಾಜಕೀಯ ಜಾಹಿರಾತುಗಳನ್ನು ೭೨ ತಾಸುಗಳ ಒಳಗೆ ತೆರವುಗೊಳಿಸುವಂತೆ

ಸೂಚಿಸಲಾಗಿದೆ. ಚುನಾವಣಾ ಉದ್ದೇಶಗಳಿಗಾಗಿ ಯಾವುದೇ ರಾಜಕೀಯ ಪಕ್ಷ ಲಾರಿ, ಟ್ರಕ್, ಟೆಂಪೊ, ಜೀಪ್, ಕಾರು, ಆಟೋರಿಕ್ಷಾ, ಬಸ್ ಹೀಗೆ ಯಾವುದೇ ರೀತಿಯ ಸರ್ಕಾರಿ ವಾಹನಗಳ ಬಳಕೆ ಮಾಡಿಕೊಳ್ಳುವುದನ್ನು ನಿಷೇಧಿಸಲಾಗಿದೆ. ಸಾರ್ವಜನಿಕ ಆಸ್ತಿ ಹಾಗೂ ರೈಲ್ವೆ ಸ್ಟೇಷನ್, ಬಸ್‌ಸ್ಟಾಂಡ್, ವಿಮಾನ ನಿಲ್ದಾಣ, ರೈಲ್ವೆ ಸೇತುವೆ, ರಸ್ತೆ, ಸರ್ಕಾರಿ ಕಚೇರಿ ಕಟ್ಟಡಗಳ ಮೇಲಿನ ಯಾವುದೇ ರೀತಿಯ ರಾಜಕೀಯ ಜಾಹಿರಾತನ್ನು ಚುನಾವಣೆ ಪ್ರಕಟಗೊಂಡ ೪೮ ತಾಸುಗಳ ಒಳಗೆ ತೆಗೆದು ಹಾಕುವಂತೆ ಕೇಂದ್ರ ಚುನಾವಣಾ ಆಯೋಗ ನಿರ್ದೇಶನ ನೀಡಿದೆ.

<><*<><>*><>

ಇಡೀ ಜಗತ್ತು ಅನಿಶ್ಚಿತತೆಯ ಸುಳಿಯಲ್ಲಿ ಸಿಲುಕಿದ್ದರೂ ಭಾರತ ವೇಗವಾಗಿ ಅಭಿವೃದ್ಧಿ ಹೊಂದುವುದನ್ನು ಮುಂದುವರಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ. ದೆಹಲಿಯಲ್ಲಿ ನಿನ್ನೆ ನಡೆದ ಇಂಡಿಯಾ ಟುಡೇ ಸಮಾವೇಶದಲ್ಲಿ ಮಾತನಾಡಿದ ನರೇಂದ್ರ ಮೋದಿ, ಭಾರತವನ್ನು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯನ್ನಾಗಿ ಮಾಡುವುದು 'ರಾಷ್ಟ್ರದ ಮನಸ್ಥಿತಿ' ಎಂದು ಒತ್ತಿ ಹೇಳಿದರು. ೨೦೧೪ ರ ಪೂರ್ವದ ಅವಧಿಯಲ್ಲಿ ಕೇವಲ ಕೆಲವು ನೂರು ನೋಂದಾಯಿತ ಸ್ಟಾರ್ಟ್ ಅಪ್ ಗಳಿದ್ದವು, ಆದರೆ ಇಂದು ಈ ಸಂಖ್ಯೆ ಸುಮಾರು ೧.೨೫ ಲಕ್ಷದಷ್ಟಿದೆ ಎಂದು ಪ್ರಧಾನಿ ಹೇಳಿದರು.

<><*<><>*><>

ನವ ಭಾರತ ಸಾಕ್ಷರತಾ ಕಾರ್ಯಕ್ರಮದ ಭಾಗವಾಗಿ ಕೇಂದ್ರ ಸರ್ಕಾರ ಇಂದು ೨೩ ರಾಜ್ಯಗಳಲ್ಲಿ ಅಡಿಪಾಯ ಸಾಕ್ಷರತೆ ಮತ್ತು ಸಂಖ್ಯಾ ಮೌಲ್ಯಮಾಪನ ಪರೀಕ್ಷೆ ಹಮ್ಮಿಕೊಂಡಿದೆ. ಈ ಮಹತ್ವದ ರಾಷ್ಟ್ರವ್ಯಾಪಿ ಮೌಲ್ಯಮಾಪನಕ್ಕೆ ಸುಮಾರು ೩೭ ಲಕ್ಷ ಕಲಿಕಾ ಮಂದಿ ಹಾಜರಾಗಲಿದ್ದಾರೆ ಎಂದು ಕೇಂದ್ರ ಶಿಕ್ಷಣ ಸಚಿವಾಲಯ ತಿಳಿಸಿದೆ. ಭಾಗವಹಿಸುವ ಪ್ರತಿಯೊಂದು ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶದ ಎಲ್ಲಾ ಜಿಲ್ಲೆಗಳಲ್ಲಿ ಎಫ್‌ಎಲ್‌ಎನ್‌ಎಟಿ ನಡೆಯಲಿದೆ. ಮೌಲ್ಯಮಾಪನ ಓದುವುದು, ಬರೆಯುವುದು ಮತ್ತು ಸಂಖ್ಯಾಶಾಸ್ತ್ರ ಸೇರಿ ಮೂರು ವಿಷಯಗಳನ್ನು ಒಳಗೊಂಡಿದೆ. ಪ್ರತಿಯೊಂದೂ ವಿಷಯ ೫೦ ಅಂಕಗಳನ್ನು ಹೊಂದಿದ್ದು, ಒಟ್ಟು ೧೫೦ ಅಂಕಗಳ ಪರೀಕ್ಷೆಯಾಗಿದೆ. ಬಹುಭಾಷತೆಯನ್ನು ಉತ್ತೇಜಿಸುವ ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ ರ ಅನುಗುಣವಾಗಿ ಪರೀಕ್ಷೆಯನ್ನು ಕಲಿಕಾ ಮಂದಿಯ ಪ್ರಾದೇಶಿಕ ಭಾಷೆಯಲ್ಲಿ ನಡೆಸಲಾಗುವುದು ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಇಂದು ಆಂಧ್ರಪ್ರದೇಶಕ್ಕೆ ಭೇಟಿ ನೀಡಲಿದ್ದು, ಪಲ್ನಾಡು ಜಿಲ್ಲೆಯಲ್ಲಿ ನಡೆಯಲಿರುವ ಎನ್‌ಡಿಎ ಚುನಾವಣಾ ಸಭೆಯಲ್ಲಿ ಭಾಗವಹಿಸಲಿದ್ದಾರೆ. ವಿಜಯವಾಡದ ಬಿಜೆಪಿ ಕಚೇರಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ವಿನೋದ್ ತಾವಡೆ, ಪಲ್ನಾಡಿನ ಚಿಲಕಲೂರಿಪೇಟೆಯಲ್ಲಿ ಪ್ರಧಾನಿ ನೇತೃತ್ವದಲ್ಲಿ ಸಭೆ ನಡೆಯಲಿದೆ. ಟಿಡಿಪಿ ವರಿಷ್ಠ ಎನ್ ಚಂದ್ರಬಾಬು ನಾಯ್ಡು ಮತ್ತು ಜನಸೇನಾ ಮುಖ್ಯಸ್ಥ ಪವನ್ ಕಲ್ಯಾಣ್ ಕೂಡ ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದರು.

<><*<><>*><>

ಒಡಿಶಾ ಬಿಜೆಪಿಯ ರಾಜ್ಯ ಚುನಾವಣಾ ಸಮಿತಿ ನಿನ್ನೆ ಸಭೆ ನಡೆಸಿದ್ದು, ವಿಧಾನಸಭೆ ಚುನಾವಣೆ ಮತ್ತು ಲೋಕಸಭೆ ಚುನಾವಣೆಗೆ ಅಭ್ಯರ್ಥಿಗಳ ಕುರಿತು ಚರ್ಚೆ ನಡೆಸಲಾಯಿತು. ರಾಜ್ಯ ಬಿಜೆಪಿ ಅಧ್ಯಕ್ಷ ಮನಮೋಹನ್ ಸಮಾಲ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಒಡಿಶಾದ ಪಕ್ಷದ ಚುನಾವಣಾ ಉಸ್ತುವಾರಿ ವಿಜಯ್ ಪಾಲ್ ಸಿಂಗ್ ತೋಮರ್, ಕೇಂದ್ರ ಸಚಿವರಾದ ಧರ್ಮೇಂದ್ರ ಪ್ರಧಾನ್ ಮತ್ತು ಬಿಶೇಶ್ವರ ತುಡು ಮತ್ತು ಸಂಸದ ಪ್ರತಾಪ್ ಸಾರಂಗಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

<><*<><>*><>

ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಟೂರ್ನಿಯ ಎರಡನೇ ಆವೃತ್ತಿಯ ಫೈನಲ್ ಪಂದ್ಯ ಇಂದು ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಡೆಲ್ಲಿ ಕ್ಯಾಪಿಟಲ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿವೆ. ಅಂಕಪಟ್ಟಿಯಲ್ಲಿ ಅಗ್ರಸ್ಥಾನ ಗಳಿಸಿದ ಡೆಲ್ಲಿ ಕ್ಯಾಪಿಟಲ್ಸ್ ತಂಡ ನೇರವಾಗಿ ಫೈನಲ್ ಪ್ರವೇಶಿಸಿದರೆ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಎಲಿಮಿನೇಟರ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವನ್ನು ಸೋಲಿಸಿ ಪ್ರಶಸ್ತಿ ಸುತ್ತು ತಲುಪಿದೆ.